# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ ಇವರು ನಿಯಮ 330 ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ.

**ನಿಯಮ-330 ರಡಿಯಲ್ಲಿ ಗಮನ ಸೆಳೆಯುವ ಸೂಚನೆ:-**

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ, ಕಾಮಿಕರಿಗೆ ಆಸ್ಪತ್ರೆ ಚಿಕಿತ್ಸೆ ವೆಚ್ಚದ ಮರುಪಾವತಿಯ ಸಂದರ್ಭದಲ್ಲಿ ಅವರಿಗೆ ಅತ್ಯಂತ ಅಲ್ಪ ಮೊತ್ತ ಮಾತ್ರ ಪಾವತಿಯಾಗುತ್ತಿದೆ. ಪ್ರಸ್ತುತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಕಾರ್ಮಿಕರಿಗೆ ಪ್ರಯೋಜನ ಶೂನ್ಯವಾದ ಹೆಲ್ತ್ ಚೆಕ್ ಅಪ್ ಕ್ಯಾಂಪ್ ಹಾಗೂ RPL ಟ್ರೈನಿಂಗ್ ಕ್ಯಾಂಪ್‌ಗಳು, ಸಂಚಾರಿ ವಾಹನ ಚಿಕಿತ್ಸೆಗಳು ಹಾಗೂ ಇನ್ನಿತರ ಕಾರ್ಯಕ್ರಮಗಳಿಗೆ ಒತ್ತು ನೀಡಿ ಟೆಂಡರ್ ರೂಪದಲ್ಲಿ ಮಂಡಳಿಯ ಹಣ ಅಪವ್ಯಯ ಆಗುತ್ತಿದೆ ಎಂದು ರಾಜ್ಯದ ಹಲವು ಕಡೆ ವಿವಿಧ ಕಾರ್ಮಿಕ ಸಂಘಟನೆಗಳು ಈಗಾಗಲೇ ಪ್ರತಿಭಟನೆ ನಡೆಸಿವೆ.

ಕಾರ್ಮಿಕರಿಗೆ ಸಂಬಂಧಿಸಿದ ಆಸ್ಪತ್ರೆ ಚಿಕಿತ್ಸೆಯ ವೆಚ್ಚವನ್ನು ನಗದುರಹಿತ ಚಿಕಿತ್ಸೆಯ ರೂಪದಲ್ಲಿ ಅನುಷ್ಠಾನಕ್ಕೆ ತಂದು, ರಾಜ್ಯದ ಎಲ್ಲಾ ಖಾಸಗಿ ಆಸ್ಪತ್ರೆಗಳಲ್ಲಿ ನಗದುರಹಿತ ಚಿಕಿತ್ಸೆ ಲಭಿಸುವಂತೆ ಮಾಡಲು ಸರ್ಕಾರ ಇದುವರೆಗೆ ಯಾವುದೇ ಕ್ರಮ ವಹಿಸದೇ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

**ಉತ್ತರ:-**

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳು ಹಾಗೂ ಅವರ ಅವಲಂಬಿತರಿಗೆ ಈ ಕೆಳಕಂಡ ವೈದ್ಯಕೀಯ ಸಹಾಯ ಧನ ನೀಡಲಾಗುತ್ತಿದೆ.

1. ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ): ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ ಒಳರೋಗಿಯಾಗಿ ದಾಖಲಾಗುವ ಪ್ರತಿ ದಿನಕ್ಕೆ ರೂ.300/- ರಂತೆ ಗರಿಷ್ಠ ರೂ.20,000/-ಗಳನ್ನು ನೀಡಲಾಗುತ್ತಿದೆ.
2. ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ: ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಹಾಗೂ ಅವರ ಅವಲಂಬಿತರು ಗಂಭೀರ ಕಾಯಿಲೆಗಳಿಗಾಗಿ ನಿಗಧಿತ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದಾಗ ಅವರ ಚಿಕಿತ್ಸಾ ವೆಚ್ಚವನ್ನು ರೂ.2,00,000/-ಗಳ ವರೆಗೆ ಮರುಪಾವತಿ ಮಾಡಲಾಗುತ್ತದೆ.

ಮಂಡಳಿಯಿಂದ ನೀಡಲಾಗುತ್ತಿರುವ ವೈದ್ಯಕೀಯ ವೆಚ್ಚದ ಮರುಪಾವತಿಯನ್ನು ಕೇಂದ್ರ ಸರ್ಕಾರವು ನಿಗಧಿಪಡಿಸಿದ ಸಿಜಿಹೆಚ್‌ಎಸ್ ದರಗಳನ್ವಯ ನೀಡಲಾಗುತ್ತಿದೆ.

ಕಟ್ಟಡ ಕಾರ್ಮಿಕರು ಕೆಲಸದ ಪರಿಸರದಿಂದಾಗಿ ಮತ್ತು ಹಲವು ಹವ್ಯಾಸಗಳ ಕಾರಣದಿಂದ ಅನಾರೋಗ್ಯಕ್ಕೆ ಈಡಾಗುತ್ತಿದ್ದು, ಅದನ್ನು ತಪ್ಪಿಸಲು ಅವರ ಆರೋಗ್ಯದ ಪರಿಸ್ಥಿತಿಯ ಬಗ್ಗೆ ಅವರಿಗೆ ವಿವಿಧ ಪರೀಕ್ಷೆಗಳನ್ನು ಮಾಡಿ ಕಟ್ಟಡ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ವರದಿಗಳನ್ನು ನೀಡಿ ಅವರಿಗಿರುವ ಖಾಯಿಲೆಗಳನ್ನು ಪತ್ತೆ ಹಚ್ಚಿ

ಆರೋಗ್ಯವನ್ನು ಕಾಪಾಡಿಕೊಳ್ಳುವ ಉದ್ದೇಶದಿಂದ ಪ್ರಿವೆಂಟೀವ್ ಹೆಲ್ತ್ ಚೆಕ್‌ಅಪ್ ಕ್ಯಾಂಪ್‌ಗಳನ್ನು ಅವರುಗಳ ಕೆಲಸದ ಸ್ಥಳದಲ್ಲಿ ಮತ್ತು ಅವರುಗಳು ವಾಸಿಸುವ ಸ್ಥಳದಲ್ಲಿ ಆಯೋಜಿಸಲಾಗಿರುತ್ತದೆ.

ಹಾಗೆಯೇ ಕಟ್ಟಡ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ಅವರು ಕೆಲಸ ಮಾಡುವ ಸ್ಥಳದಲ್ಲಿ ಹಾಗೂ ಅವರು ವಾಸಿಸುವ ಸ್ಥಳದಲ್ಲಿ ತೆರಳಿ ಅವರ ಅನಾರೋಗ್ಯಕ್ಕೆ ಚಿಕಿತ್ಸೆ ನೀಡಿ, ಉಚಿತವಾಗಿ ಔಷಾದೋಪಚಾರ ನೀಡಲು ರಾಜ್ಯದಾದ್ಯಂತ 100 ಮೊಬೈಲ್ ಮೆಡಿಕಲ್ ಕೆಂದ್ರುಗಳನ್ನು ಆರಂಭಿಸಲಾಗಿದೆ. ಈ ಎರಡೂ ಯೋಜನೆಗಳಿಂದ ಕಾರ್ಮಿಕರು ಮತ್ತು ಅವರ ಅವಲಂಬಿತರು ತಮ್ಮ ಆರೋಗ್ಯದ ಬಗ್ಗೆ ಮುನ್ನೆಚ್ಚರಿಕೆಯನ್ನು ತೆಗೆದುಕೊಳ್ಳಲು ಸಾಧ್ಯವಾಗುತ್ತದೆ.

ಕಟ್ಟಡ ಕಾರ್ಮಿಕರ ಕೌಶಲ್ಯವನ್ನು ಅಭಿವೃದ್ಧಿಸುವ ಉದ್ದೇಶದಿಂದ ಆರ್.ಪಿ.ಎಲ್ ಟ್ರೈನಿಂಗ್ ಕ್ಯಾಂಪ್‌ಗಳನ್ನು ಆಯೋಜಿಸಲಾಗುತ್ತಿದೆ. ಮಂಡಳಿಯ ಎಲ್ಲಾ ಯೋಜನೆಗಳನ್ನು ಮಂಡಳಿ ಸಭೆಯ ತೀರ್ಮಾನ ಹಾಗೂ ನಿಯಾಮಾನುಸಾರ ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ವಯ ಅನುಷ್ಠಾನಗೊಳಿಸಲಾಗುತ್ತಿದೆ. ಯೋಜನೆಗಳನ್ನು ಅನುಷ್ಠಾನಗೊಳಿಸುವಾಗ ಕೆಟಿಪಿಪಿ ಕಾಯ್ದೆಯ ನಿಯಮಗಳನ್ವಯ ಮುಕ್ತ ಟೆಂಡರ್ ಕರೆದು ಪಾರದರ್ಶಕ ಪ್ರಕ್ರಿಯೆಯ ಮೂಲಕ ಸಂಸ್ಥೆಗಳನ್ನು ಆಯ್ಕೆಮಾಡಿಕೊಳ್ಳಲಾಗುತ್ತಿದೆ.

ಮುಂದುವರೆದು, ಕರ್ನಾಟಕ ಸರ್ಕಾರದ ಆರೋಗ್ಯ ಇಲಾಖೆಯ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನವರು ಅನುಷ್ಠಾನಗೊಳಿಸುತ್ತಿರುವ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನಗೆ ಮಂಡಳಿಯ ಎಲ್ಲಾ ಫಲಾನುಭವಿಗಳನ್ನು ಒಳಪಡಿಸಲು ಕ್ರಮವಹಿಸಲಾಗುತ್ತಿದೆ. ಇದರಿಂದ ಸದರಿ ಯೋಜನೆಯಡಿ ನೋಂದಣಿಯಾಗಿರುವ 3512 ಆಸ್ಪತ್ರೆಗಳಲ್ಲಿ ಮಂಡಳಿಯ ಎಲ್ಲಾ ಫಲಾನುಭವಿಗಳು ಹಾಗೂ ಅವರ ಅವಲಂಬಿತರು ರೂ.5.00 ಲಕ್ಷಗಳವರೆಗೆ ನಗದುರಹಿತ ಚಿಕಿತ್ಸೆಯನ್ನು ಪಡೆಯಲು ಅವಕಾಶವಿರುತ್ತದೆ.

**ಕಾಇ 496 ಎಲ್‌ಇಟಿ 2025**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**